ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಶಿಕ್ಷಣ ಇಲಾಖೆಯಿಂದ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಅನುದಾನ ನೀಡುವ ಬಗ್ಗೆ

ಶ್ರೀ ಪ್ರಕಾಶ್ ಕೆ ರಾಥೋಡ್(ನಾಮನಿರ್ದೇಶನ ಹೊಂದಿದವರು) –

78 (31) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅತಿಥಿ ಶಿಕ್ಷಕರು, ಉಪನ್ಯಾಸಕರು ಸಾವಿರಾರು ಸಂಖ್ಯೆಯಲ್ಲಿ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸು ತ್ತಿರುವ ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು; (ವಿವರ ನೀಡುವುದು)

(ಇ) ಸರ್ಕಾರಿ ಅನುದಾನಿತ, ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಉ) ಶಿಕ್ಷಣ ಇಲಾಖೆಯಿಂದ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಪರಿಶಿಷ್ಟ ಜಾತಿಯವರಿಗೆ ಅನುದಾನ ನೀಡುವ ಗುರಿಯನ್ನು ಹೊಂದಿದೆಯೇ; ಹೊಂದಿದ್ದಲ್ಲಿ, ಅದಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು? (ವಿವರ ನೀಡುವುದು)